**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/156/ಶೈವಿ/ರೆಡ್ ಕ್ರಾಸ್/2024-25

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-01, ದಿನಾಂಕ:20-02-2026

**ಸುತ್ತೋಲೆ**

**ವಿಷಯ:** ಯುವ ರೆಡ್ ಕ್ರಾಸ್ ಘಟಕದ ಮೂಲಕ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಹಯೋಗದಲ್ಲಿ ಸ್ವಯಂಸೇವಾ ರಕ್ತದಾನ ಶಿಬಿರಗಳನ್ನು ಆಯೋಜಿಸುವ ಬಗ್ಗೆ.

**ಉಲ್ಲೇಖ:** ಪ್ರಧಾನ ಕಾರ್ಯದರ್ಶಿಗಳು, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ ಇವರ ಪತ್ರ ಸಂಖ್ಯೆ:IRCS/YRC/BDC/3026/25-26 ದಿನಾಂಕ:12-01-2026.

*******

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಯುವ ರೆಡ್ ಕ್ರಾಸ್ ಘಟಕಗಳ ಮೂಲಕ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ ಹಾಗೂ ಸಂಬಂಧಿಸಿದ ಜಿಲ್ಲಾ ಶಾಖೆಗಳ ಸಹಯೋಗದಲ್ಲಿ ಪ್ರಥಮ ಆದ್ಯತೆಯಲ್ಲಿ ಸ್ವಯಂಸೇವಾ ರಕ್ತದಾನ ಶಿಬಿರಗಳನ್ನು ಆಯೋಜಿಸುವಂತೆ ಕೋರಿರುತ್ತಾರೆ.

ಯುವ ರೆಡ್ ಕ್ರಾಸ್ ಘಟಕಗಳು ವಿದ್ಯಾರ್ಥಿಗಳನ್ನು ಮಾನವೀಯ ಸೇವೆಗಳಿಗೆ ಸಂಘಟಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ, ಸ್ವಯಂ ಸೇವಾ ರಕ್ತದಾನವು ಜೀವ ಸಂರಕ್ಷಣೆಯ ಮಹತ್ತರ ಸೇವೆಯಾಗಿರುವುದರೊಂದಿಗೆ ಸಾರ್ವಜನಿಕ ಆರೋಗ್ಯ ವ್ಯವಸ್ಥೆಗೆ ಬಹು ಮುಖ್ಯ ಬೆಂಬಲ ಒದಗಿಸುತ್ತದೆ ಆದರಿಂದ ಈ ಇಲಾಖಾ ವ್ಯಾಪ್ತಿಗೊಳಪಡುವ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಪದವಿ ಕಾಲೇಜುಗಳಲ್ಲಿನ ಯುವ ರೆಡ್ ಕ್ರಾಸ್ ಘಟಕಗಳ ಮೂಲಕ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ ಹಾಗೂ ಸಂಬಂಧಿಸಿದ ಜಿಲ್ಲಾ ಶಾಖೆಗಳ ಸಹಯೋಗದಲ್ಲಿ ಸ್ವಯಂಪ್ರೇರಿತ ರಕ್ತದಾನ ಶಿಬಿರಗಳನ್ನು ಆದ್ಯತೆಯ ಮೇರೆಗೆ ಆಯೋಜಿಸಲು ಕ್ರಮ ಕೈಗೊಳ್ಳುವ ಬಗ್ಗೆ ಪ್ರಾಂಶುಪಾಲರುಗಳಿಗೆ ಈ ಮೂಲಕ ಸೂಚಿಸಲಾಗಿದೆ.

ಅಡಕ: ಉಲ್ಲೇಖಿತ ಪತ್ರದ ಪ್ರತಿ

Manjula

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ:**

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2. ರಾಜ್ಯದ ಎಲ್ಲಾಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:**

1. ಪ್ರಧಾನ ಕಾರ್ಯದರ್ಶಿ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ, ನಂ. 26 ರೆಡ್ ಕ್ರಾಸ್ ಭವನ, 1ನೇ ಮಹಡಿ ರೆಸ್ ಕೋರ್ಸ್ ರಸ್ತೆ, ಬೆಂಗಳೂರು-560001.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,ಬೆಂಗಳೂರು ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
3. ಕಛೇರಿ ಪ್ರತಿ.